## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1281

ಸದಸ್ಯರ ಹೆಸರು : ಶ್ರೀ ಎನ್.ರವಿಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 19.03.2025

ಉತ್ತರಿಸುವ ಸಚಿವರು : ಮಾನ್ಯ ವಸತಿ, ವಕ್ಫ್ ಮತ್ತು
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು
ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿಯಲ್ಲಿರುವ ಶ್ರೀರಾಘವ ಚೈತನ್ಯ ಶಿವಲಿಂಗವು ವಕ್ಫ್ ಇಲಾಖೆಯ ಅಧೀನದಲ್ಲಿದೆಯೇ; ಶೈವ ಸಂಪ್ರದಾಯದ ಪ್ರಕಾರ ಪ್ರತಿ ದಿನ ಪೂಜೆಗೊಳ್ಳಬೇಕಾದ ಶಿವಲಿಂಗಕ್ಕೆ ಮಾನ್ಯ ನ್ಯಾಯಾಲಯದ ಆದೇಶದ ಅನ್ವಯ ಪೂಜೆ ಸಲ್ಲಿಸಬೇಕಾಗಿರುವ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು) | ಕಲಬುರಗಿಯಲ್ಲಿರುವ ಶ್ರೀರಾಘವ ಚೈತನ್ಯ ಶಿವಲಿಂಗ ಎಂಬ ಹೆಸರಿನಲ್ಲಿ ಯಾವುದೇ ನೋಂದಾಯಿತ ವಕ್ಫ್ ಆಸ್ತಿಯು ವಕ್ಫ್ ಇಲಾಖೆಯ ಅಧೀನದಲ್ಲಿ ಇರುವುದಿಲ್ಲ.<br><br>ಕರ್ನಾಟಕ ಉಚ್ಚ ನ್ಯಾಯಾಲಯ, ಕಲಬುರಗಿ ಪೀಠದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ :200497/2025-ಶ್ರೀ ಸಿದ್ಧರಾಮಯ್ಯ ಹಿರೇಮಠ್ ವಿರುದ್ಧ ರಾಜ್ಯ ಸರ್ಕಾರ ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:25.02.2025ರಲ್ಲಿ ನೀಡಿರುವ ಮಧ್ಯಂತರ ಆದೇಶದಲ್ಲಿ ಸೂಚಿಸಲಾಗಿರುವ ಷರತ್ತಿಗೊಳಪಟ್ಟು ದಿ:26.02.2025ರಂದು ಮಧ್ಯಾಹ್ನ 2 ರಿಂದ ಸಂಜೆ 6ರವರೆಗೆ ಮಹಾಶಿವರಾತ್ರಿ ಪ್ರಯುಕ್ತ ಒಂದು ದಿನದ ಅವಧಿಗೆ ಮಾತ್ರ ಪೂಜೆಯನ್ನು ಸಲ್ಲಿಸಲು ಅವಕಾಶ ನೀಡಲಾಗಿರುತ್ತದೆ. |
| ಆ) | ದೇಶವು ಸಂವಿಧಾನದ ಆಶಯದಂತೆ ದೇಶದ ಪ್ರತಿಯೊರ್ಙವ ಪ್ರಜೆಗೂ ಅವನಿಷ್ಟದಂತೆ ಅವರ ಧರ್ಮಾಚರಣೆಗಳನ್ನು ಆಚರಿಸಲು ಹಕ್ಕು ಇದ್ದು ಈ ಕುರಿತು ಸರ್ಕಾರದ ನಿಲುವೇನು; | ಪ್ರಸ್ತಾಪಿತ ವಿಷಯದ ಕುರಿತು ಕರ್ನಾಟಕ ಉಚ್ಚ ನ್ಯಾಯಾಲಯ, ಕಲಬುರಗಿ ಪೀಠದಲ್ಲಿ CRP NO:200071/2024ನ್ನು ದಾಖಲಿಸಲಾಗಿದ್ದು, ಪ್ರಸ್ತುತ ಸದರಿ ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿದೆ.<br><br>ಸದರಿ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ಆದೇಶದ ಅನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು. |
| ಇ) | ಶ್ರೀರಾಘವ ಚೈತನ್ಯ ಶಿವಲಿಂಗಕ್ಕೆ ಪ್ರತಿ ದಿನ ಪೂಜಾ ಕೈಕಂರ್ಯಗಳನ್ನು ಕೈಗೊಳ್ಳುವಂತೆ ಮಾಡಲು ವಕ್ಫ್ ಇಲಾಖೆಯು ಕೈಗೊಂಡ ಕ್ರಮಗಳೇನು ? | |

**ಸಂಖ್ಯೆ: MWD-LMQ/60/2025**

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.